# 2 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯಃ

## ಉತ್ತರ ಕನ್ನಡ : ಕಾರವಾರ

**ಸ್ಪೇಷಲ್ ಕೇಸ್ ನಂ. 142/2022**

**ದೋ.ಸಾ. : 04 ಫ್ರಾ.ಸಾ. : 03**

**ದಿನಾಂಕಃ 04-12-2024 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಪಾಟೀ ಸವಾಲುಃ 1 ನೇ ಆರೋಪಿ ಪರ ಎಲ್.ಎ.ಡಿ.ಸಿ ವಕೀಲರಿಂದ**

5. ನಾನು ಈ ಮೊದಲು 7-8 ಪ್ರಕರಣಗಳ ಪಂಚನಾಮೆಯಲ್ಲಿ ಪಂಚನಾಗಿ ಸಹಿ ಮಾಡಿರುತ್ತೇನೆ. ನನಗೆ ಕನ್ನಡ ಓದಲು- ಬರೆಯಲು ಬರುತ್ತದೆ. ದಾಂಡೇಲಿಯ ಗ್ರಾಮೀಣ ಪೊಲೀಸ್ ಠಾಣೆಯ ಮುಂದೆ ಬಹಳಷ್ಟು ಅಂಗಡಿಗಳು ಇರುತ್ತವೆ ಹಾಗೂ ಬಹಳಷ್ಟು ಜನರು ಓಡಾಡುತ್ತಾರೆ ಎಂದರೆ ಸಾಕ್ಷಿಯು ಠಾಣೆಯ ಕೌಂಪಾಂಡ ಒಳಗಡೆ ಯಾವುದೇ ಅಂಗಡಿಗಳಿಲ್ಲ ಆದರೆ ಹೊರಗಡೆ ಅಂಗಡಿಗಳು ಇರುತ್ತವೆ ಎಂದು ನುಡಿಯುತ್ತಾರೆ. ನಮ್ಮ ಮನೆಯಿಂದ ದಾಂಡೇಲಿಯ ಗ್ರಾಮೀಣ ಪೊಲೀಸ್ ಠಾಣೆ 1 ಕಿ.ಮೀ ದೂರದಲ್ಲಿರುತ್ತದೆ. ಪಂಚನಾಮೆಯನ್ನು ಇದೇ ರೀತಿ ಬರೆಯಬೇಕೆಂದು ಪೊಲೀಸರಿಗೆ ನಾನು ಯಾವುದೇ ಮಾಹಿತಿಯನ್ನು ನೀಡಿರುವುದಿಲ್ಲ. ಪಂಚನಾಮೆಯಲ್ಲಿ ಏನು ಬರೆದಿದ್ದಾರೆ ಎಂದು ಮಾಹಿತಿ ಇಲ್ಲ ಎಂದರೆ ಸಾಕ್ಷಿಯು ಪೊಲೀಸರು ನನಗೆ ಓದಿ ಹೇಳಿರುತ್ತಾರೆ ಎಂದು ನುಡಿಯುತ್ತಾರೆ. ಪೊಲೀಸ್ ಠಾಣೆಯಲ್ಲಿಯೇ ಪೊಲೀಸರು ನನ್ನ ಸಹಿಯನ್ನು ಪಡೆದುಕೊಂಡಿರುತ್ತಾರೆ ಎಂದರೆ ಸಾಕ್ಷಿಯು ಪಂಚನಾಮೆ ಮಾಡಿದ ಸ್ಥಳದಲ್ಲಿ ಸಹಿ ಮಾಡಿರುತ್ತೇನೆ ಎಂದು ನುಡಿಯುತ್ತಾರೆ. ಪಂಚನಾಮೆಯನ್ನು ಪೊಲೀಸ್ ಸಿಬ್ಬಂದಿಯಾದ ಮಂಜುನಾಥ ಶೆಟ್ಟಿಯವರು ಬರೆದಿರುತ್ತಾರೆ. ನಾನು ಯಾವುದೇ ಸ್ಥಳಕ್ಕೆ ಹೋಗಿಲ್ಲ, ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿಲ್ಲ ಎಂದರೆ ಸರಿಯಲ್ಲ. ನಿಪಿ-10, 11, 13 ಮತ್ತು 16 ಪೋಟೋಗಳನ್ನು ಸ್ಥಳದಲ್ಲಿ ತೆಗೆದಿಲ್ಲ ಎಂದರೆ ಸರಿಯಲ್ಲ. ಮುದ್ದೆ ಮಾಲು-7 ಮೊಳೆ ಸಾಮಾನ್ಯವಾಗಿ ಗೋಡೆಗಳಿಗೆ ಹೊಡೆದಿರುತ್ತಾರೆ ಹಾಗೂ ಅಂಗಡಿಗಳಲ್ಲಿ ಸಿಗುತ್ತದೆ ಎಂದರೆ ಸರಿ. ಮುದ್ದೆ ಮಾಲು-4 ಸೀರೆ ಸಾಮಾನ್ಯವಾಗಿ ಎಲ್ಲಾ ಅಂಗಡಿಗಳಲ್ಲಿ ಸಿಗುತ್ತವೆ ಎಂದರೆ ಸರಿ. ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ಜಪ್ತುಪಡಿಸಿಕೊಂಡಿಲ್ಲ ಎಂದರೆ ಸರಿಯಲ್ಲ. ನಾನು ಪೊಲೀಸರ ಖಾಯಂ ಪಂಚನಾಗಿರುತ್ತೇನೆ

ಎಂದರೆ ಸರಿಯಲ್ಲ. ನಾನು ಪೊಲೀಸರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ 2 ನೇ ಆರೋಪಿ ಪರ ಶ್ರೀ ವಿ.ಎ.ಟಿ ವಕೀಲರಿಂದ**

6. ನಿಪಿ–8 ಮತ್ತು 14 ಪಂಚನಾಮೆಗಳನ್ನು ಲ್ಯಾಪ್ ಟಾಪ್ ನಲ್ಲಿ ಟೈಪ್ ಮಾಡಿರುತ್ತಾರೆ. ಲ್ಯಾಪ್ ಟಾಪ್ ಹಾಗೂ ಪ್ರಿಂಟರ್ ನ್ನು ಪಂಚನಾಮೆಯ ಸ್ಥಳಕ್ಕೆ ತಂದ ಬಗ್ಗೆ ಪಂಚನಾಮೆಯಲ್ಲಿ ನಮೂದಿಸಲಾಗಿರುತ್ತದೆ. ಸದರಿ ಲ್ಯಾಪ್ ಟಾಪ್ ಮತ್ತು ಪ್ರಿಂಟರ್ ಗಳ ಕಂಪನಿ ಹೆಸರು ಗಳನ್ನು ಪಂಚನಾಮೆಯಲ್ಲಿ ನಮೂದಿಸಿದ ಬಗ್ಗೆ ನನಗೆ ಗೊತ್ತಿಲ್ಲ. ನಿಪಿ–8 ಪಂಚನಾಮೆಯ ಮೇಲೆ ನನ್ನ ಸಹಿಯನ್ನು ಸ್ಥಳದಲ್ಲಿ ತೆಗೆದುಕೊಂಡಿರತ್ತಾರೆ ಹಾಗೂ ನಿಪಿ–14 ಪಂಚನಾಮೆಯ ಮೇಲೆ ನನ್ನ ಸಹಿಯನ್ನು ಪೊಲೀಸ್ ಠಾಣೆಯಲ್ಲಿ ತೆಗೆದುಕೊಂಡಿರುತ್ತಾರೆ. ನನ್ನ ಸಮಕ್ಷಮ ಪಂಚನಾಮೆಗಳನ್ನು ಮಾಡಿದ ಹಾಗೂ ವಸ್ತುಗಳನ್ನು ಜಪ್ತುಪಡಿಸಿಕೊಂಡಿದ್ದನ್ನು ಬಿಟ್ಟರೆ ಬೇರೆ ಇನ್ನೇನನ್ನು ಮಾಡಿಲ್ಲ ಎಂದರೆ ಸರಿ. ನಿಪಿ–8 ಮತ್ತು 14 ಪಂಚನಾಮೆಗಳ ಯಾವ–ಯಾವ ಕಂಡಿಕೆಗಳಲ್ಲಿ ಏನೇನು ಬರೆಯಲಾಗಿದೆ ಎಂದು ಹೇಳಲಾಗುವುದಿಲ್ಲ ಎಂದರೆ ಸರಿಯಲ್ಲ. ನಿಪಿ–8 ಪಂಚನಾಮೆಯ 1 ಮತ್ತು 2 ಪ್ಯಾರಾದಲ್ಲಿ ಏನು ಬರೆಯಲಾಗಿದೆ ಎಂದರೆ ನನಗೆ ಗೊತ್ತಿಲ್ಲ. ನನ್ನ ಸಮಕ್ಷಮ ನಿಪಿ–8 ಮತ್ತು 14 ಪಂಚನಾಮೆಗಳನ್ನು ಮಾಡಿಲ್ಲ ಎಂದರೆ ಸರಿಯಲ್ಲ. ನಿಪಿ–8 ಮತ್ತು 14 ಪಂಚನಾಮೆಗಳನ್ನು ಪೊಲೀಸ್ ಠಾಣೆಯಲ್ಲಿಯೇ ಬರೆದು, ನನ್ನ ಸಹಿಗಳನ್ನು ಪಡೆದುಕೊಂಡಿರುತ್ತಾರೆ ಎಂದರೆ ಸಾಕ್ಷಿಯು ಸ್ಥಳದಲ್ಲಿಯೇ ಸಹಿಗಳನ್ನು ಪಡೆದುಕೊಂಡಿರುತ್ತಾರೆ ಎಂದು ನುಡಿಯುತ್ತಾರೆ.

7. ನಿಪಿ–8 ಪಂಚನಾಮೆಯ ಕಾಲಕ್ಕೆ ಸ್ಥಳಕ್ಕೆ ಲ್ಯಾಪ್ ಟಾಪ್ ಹಾಗೂ ಪ್ರಿಂಟರ್ ನ್ನು ತೆಗೆದುಕೊಂಡು ಹೋಗಿಲ್ಲ ಎಂದರೆ ಸಾಕ್ಷಿಯು ಜೀಪ್ ನಲ್ಲಿ ತಂದಿರುತ್ತಾರೆ ಎಂದು ನುಡಿಯುತ್ತಾರೆ. ಜೀಪ್ ನಲ್ಲಿ ಇನ್ ವರ್ಟರ್ ಹಾಗೂ ಬ್ಯಾಟರಿ ತಂದಿದ್ದರಾ ಎಂದರೆ ಸಾಕ್ಷಿಯು ಅಲ್ಲಿಯೇ ಕರೆಂಟ್ ಇತ್ತು ಎಂದು ನುಡಿಯುತ್ತಾರೆ. ನಿಪಿ–10, 11, 13, 16,17 ಮತ್ತು 18 ಪೋಟೋಗಳಲ್ಲಿ ಕಾಣಿಸಿರುವ ಸ್ಥಳಗಳ ಚೆಕ್ ಬಂದಿ ನನಗೆ ಹೇಳಲು ಬರುವುದಿಲ್ಲ. ಮುದ್ದೆ ಮಾಲು–4 ಸೀರೆಯು ನಿಪಿ–14 ರ ಪಂಚನಾಮೆಯ ಕಾಲದಲ್ಲಿ ಜಪ್ತುಪಡಿಸಿಕೊಂಡ ಸೀರೆ ಅಲ್ಲ ಎಂದರೆ ಸರಿಯಲ್ಲ. ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿಲ್ಲ ಹಾಗೂ ಯಾವುದೇ ವಸ್ತುಗಳನ್ನು ಜಪ್ತುಪಡಿಸಿಕೊಂಡಿಲ್ಲ ಎಂದರೆ ಸರಿಯಲ್ಲ.

Spl. C. No. 142/2022
PW.03

**<u>ಮರು ವಿಚಾರಣೆಃ ಇಲ್ಲ</u>**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಸಾಕ್ಷಿಯ ಹೇಳಿಕೆಯನ್ನು ಗಣಕ ಯಂತ್ರದ ಮೂಲಕ ಬೆರಳಚ್ಚು ಮಾಡಿಸಲಾಗಿದೆ.)

ಓ.ಹೇ.ಕೇ.ಸ.ಇ.

ಸಹಿ ಇದೆ/-

(ಮಾಯಣ್ಣ ಬಿ.ಎಲ್.)
2 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಉತ್ತರಕನ್ನಡ, ಕಾರವಾರ